# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

.../ವಾ.ನಂ.39/ಪಿಆರ್/336/2021-22

ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ
ಪೀಣ್ಯ ಕೈಗಾರಿಕಾ ಪ್ರದೇಶ ಉಪವಿಭಾಗ, ದಾಸರಹಳ್ಳಿ ವಲಯ
ಹೆಚ್.ಎಂ.ಟಿ.ಬಡಾವಣೆ, ನಾಗಸಂದ್ರ ಪೋಸ್ಟ್
ಬೆಂಗಳೂರು. ದಿನಾಂಕ : 04.12.2021

## ವಾರ್ಡ್ -39ರ ವಾರ್ಡ್ ಸಭೆಯ ನಡವಳಿ

ದಿನಾಂಕ:-04-12-2021 ರಂದು ಪೀಣ್ಯ ಕೈಗಾರಿಕ ಪ್ರದೇಶ ಉಪ ವಿಭಾಗ ವಾರ್ಡ್ ನಂ.39 ರ ವಾರ್ಡ್ ಕಛೇರಿಯಲ್ಲಿ ಶ್ರೀ.ಪುಟ್ಟಸ್ವಾಮಿ ಜೆ, ವಾರ್ಡ್-39 ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿಗಳು.

ಹಾಜರಿದ್ದವರು:

1. ಶ್ರೀ ಪುಟ್ಟಸ್ವಾಮಿ ಜೆ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು
2. ಶ್ರೀಮತಿ.ಅರ್ಚನ ಸಹಾಯಕ ಅಭಿಯಂತರರು ಮತ್ತು ಕಾರ್ಯದರ್ಶಿ
3. ಶ್ರೀ.ರಾಮಕೃಷ್ಣ, ಮೌಲ್ಯ ಮಾಪಕರು, ವಾ.ನಂ.39
4. ಶ್ರೀ ಹೆಚ್.ರಮೇಶ್, ಕಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಸದಸ್ಯರು
5. ಪಿ.ಎಸ್.ಐ, ಪೀಣ್ಯ ಪೊಲೀಸ್ ಠಾಣೆ
6. ನಾರಯಾಣ, ವಿದ್ಯುತ್ ಸಹಾಯಕ ದಾಸರಹಳ್ಳಿ ವಲಯ
7. ಡಿ.ಆರ್.ಮಾಳಯ್ಯ, ನೀರು ಸರಬರಾಜು ಸಹಾಯಕರು ವಾ.ನಂ.39
8. ರಮೇಶ್.ಟಿ. ನೀರು ಸರಬರಾಜು ಸಹಾಯಕರು ವಾ.ನಂ.39

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು

- ಹಿಂದಿನ ಸಭೆಯ ನಡವಳಿಗಳು ಓದಿ ರೆಕಾರ್ಡ್ ಮಾಡಲಾಯಿತು ಅದರಂತೆ ಡಿ.ಡಬ್ಲ್ಯೂ.ಸಿ.ಸಿ ಸೆಂಟರ್‌ನಲ್ಲಿ ಶೌಚಾಲಯ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಬಗ್ಗೆ ತುರ್ತಾಗಿ ಕ್ರಮವಹಿಸುವಂತೆ ತಿಳಿಸಲಾಯಿತು.
- ಘನತ್ಯಾಜ್ಯ ನಿರ್ವಹಣೆ ಬಗ್ಗೆ ಸಭೆಯಲ್ಲಿ ಕಿರಿಯ ಆರೋಗ್ಯ ಪರಿವೀಕ್ಷಕರಾದ ರಮೇಶ್ ರವರು ಪ್ರಸ್ತಾಪಿಸುತ್ತಾ ವಾರ್ಡಿನಲ್ಲಿ ಸ್ವಚ್ಚತೆ ಮತ್ತು ಘನತ್ಯಾಜ್ಯ ನಿರ್ವಹಣೆಗೆ ಸೂಸ್ತ್ರವಾಗಿ ನಡೆದಿರುತ್ತದೆ ಯಾವುದೇ ದೂರು ಬಂದರು ತಕ್ಷಣ ಕ್ರಮವಹಿಸಲಾಗುತ್ತಿದೆ. ಎಲ್ಲಾ ಆಟೋಗಳಿಗೆ ಜಿ.ಪಿ.ಎಸ್ ಮತ್ತು ಆರ್.ಎಫ್.ಐ.ಡಿ ಅಳವಡಿಸಿ ಹಸಿಕಸವನ್ನು ಮತ್ತು ಬೀದಿ ಗುಡಿಸಿದ ಕಸವನ್ನು ಸಂಗ್ರಹಿಸಲಾಗುತ್ತಿದೆ ಅದರಂತೆ ಒಣ ತ್ಯಾಜ್ಯಕ್ಕೆ 4 ಆಟೋಗಳು ನಿಯೋಜಿಸಿದ್ದು ವಾರಕ್ಕೆ 2 ಬಾರಿ ಒಣಕಸವನ್ನು ಸಂಗ್ರಹಣೆ ಮಾಡಲಾಗುತ್ತಿದೆ ಎಂದು ಸಭೆಗೆ ಮಾಹಿತಿ ನೀಡಿದರು.
- ಬೀದಿ ದೀಪಗಳ ನಿರ್ವಹಣೆ ಬಗ್ಗೆ ಟೆಂಡರ್ ನಡೆದಿದ್ದು ಈ ಬಗ್ಗೆ ಮಾನ್ಯ ಶಾಸಕರು ಪಿ.ಐ.ಎ ಕಚೇರಿ ಸಭೆಯಲ್ಲಿ ತಿಳಿಸಿದ ಮೇರೆಗೆ ತುರ್ತಾಗಿ ಬಂದಿರುವ ದೂರುಗಳನ್ನು ಪರಿಹರಿಸುವಂತೆ ವಾರ್ಡ್ ಕಛೇರಿಯಲ್ಲಿ ದೂರು ಪುಸ್ತಕ ಇದ್ದು ಬಂದಿರುವ ದೂರುಗಳನ್ನು ಪರಿಹರಿಸುವಂತೆ ಸಭೆಯಲ್ಲಿ ನೋಡಲ್ ಅಧಿಕಾರಿಗಳು ತಿಳಿಸಿದರು.
- ಉದ್ಯಾನವನಗಳ ನಿರ್ವಹಣೆ ಬಗ್ಗೆ ಸಭೆಯಲ್ಲಿ ಮಾತನಾಡುತ್ತಾ ಉದ್ಯಾನವನಗಳಲ್ಲಿ ಹಸಿರು ಎಲೆ ಬಿಳುತ್ತಿದ್ದು ಬೆಂಕಿ ಹಾಕದಂತೆ ಗೊಬ್ಬರ ತಯಾರಿಸುವಂತೆ ಹಾಗೂ ಬೆಂಕಿ ಬಿದ್ದರೆ ತಕ್ಷಣ ಹಾರಿಸುವಂತೆ ಹಾಗೂ ಘನತ್ಯಾಜ್ಯ ವಿಲೇವಾರಿ ಆಟೋಗಳಿಗೆ ತುಂಬಿಸುವಂತೆ ಸಭೆಯಲ್ಲಿ ನೋಡಲ್ ಅಧಿಕಾರಿಗಳು ತಿಳಿಸಿದರು.

ಮು.ತಿ.ನೋ

ಅಪಾರ್ಟ್ ಮೆಂಟ್ ಪಕ್ಕದಲ್ಲಿ ಅನಧಿಕೃತವಾಗಿ ವಾಹನ ನಿಲುಗಡೆ ಮಾಡುತ್ತಿದ್ದು ಸದರಿ ...ಗದಲ್ಲಿ ಸಿ.ಸಿ.ಟಿ.ವಿ ಅಳವಡಿಸಲು ಹಾಜರಿದ್ದ ಪೀಣ್ಯ ಪೊಲೀಸ್ ಠಾಣೆಯವರು ಸಭೆಯಲ್ಲಿ ...ದರು.

ಅಂತಿಮವಾಗಿ ನೋಡಲ್ ಅಧಿಕಾರಿಗಳು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಂಡ ಎಲ್ಲಾ ಇಲಾಖೆಗಳ ಸಮನ್ವತೆಯಿಂದ ಕೆಲಸ ನಿರ್ವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ. 39 ಚೊಕ್ಕಸಂದ್ರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ
ವಾರ್ಡ್ ನಂ. 39 ಚೊಕ್ಕಸಂದ್ರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಅಧಿಕಾರಿಗಳ ಮಾಹಿತಿಗಾಗಿ

1. ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
2. ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3. ಉಪ ನಿಯಂತ್ರಕರು (ಹಣಕಾಸು) ದಾ.ವ ರವರ ಮಾಹಿತಿಗಾಗಿ ಕಳುಹಿಸಿದೆ.
4. ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪೀ.ಕೈ.ಪ್ರ)ರವರ ಮಾಹಿತಿಗಾಗಿ ಕಳುಹಿಸಿದೆ
6. ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ) ರವರ ಮಾಹಿತಿಗಾಗಿ ಕಳುಹಿಸಿದೆ
7. ಸಹಾಯಕ ಕಾರ್ಯಪಾಲಕ ಅಭಿಯಂತರರು (SWD) ರವರ ಮಾಹಿತಿಗಾಗಿ ಕಳುಹಿಸಿದೆ
8. ಸಹಾಯಕ ಕಾರ್ಯಪಾಲಕ ಅಭಿಯಂತರರು (BWSSB)ರವರ ಮಾಹಿತಿಗಾಗಿ ಕಳುಹಿಸಿದೆ
9. ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ರವರ ಮಾಹಿತಿಗಾಗಿ ಕಳುಹಿಸಿದೆ
10. ಸಹಾಯಕ ಕಾರ್ಯಪಾಲಕ ಅಭಿಯಂತರರು (ಯೋಜನೆ) ರವರ ಮಾಹಿತಿಗಾಗಿ ಕಳುಹಿಸಿದೆ
11. ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ ಎನ್-5 ಪೀಣ್ಯ ರವರ ಮಾಹಿತಿಗಾಗಿ ಕಳುಹಿಸಿದೆ